ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

# **ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಉಪ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

110 (27) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯಲ್ಲಿನ ಪ್ರಾಥಮಿಕ ಉಪ ಆರೋಗ್ಯ ಕೇಂದ್ರಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ಮತ್ತು ಯಾವ ಯಾವ ಉಪ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು; (ವಿವರ ನೀಡುವುದು)

(ಆ) ಈವರೆಗೆ ಯಾವ ಯಾವ ಉಪ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗಿದೆ ಹಾಗೂ ಎಷ್ಟು ಬಾಕಿ ಉಳಿದಿದೆ? (ವಿವರ ನೀಡುವುದು)